**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:– **ದಿನಾಂಕ:01-06-1987ರಿಂದ ಡಿಸೆಂಬರ್ 1996ರವರೆಗೆ ಪ್ರಾರಂಭವಾಗಿರುವ ಖಾಸಗಿ ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೊಳಪಡಿಸುವ ಬಗ್ಗೆ.**

ಓದಲಾಗಿದೆ:– ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯದ ಪತ್ರಗಳು ಸಂ. ಶಿತ3. ಇತರೆ ಅನುದಾನ02/2004-05, ದಿನಾಂಕ:31-12-2010 ಮತ್ತು ದಿನಾಂಕ:04-11-2011

ಪ್ರಸ್ತಾವನೆ:–

1) ಕರ್ನಾಟಕ ರಾಜ್ಯದಲ್ಲಿ ದಿನಾಂಕ:01-06-1987ರಿಂದ ಡಿಸೆಂಬರ್ 1996ರವರೆಗೆ ಪ್ರಾರಂಭವಾಗಿರುವ ಖಾಸಗಿ ಶಿಕ್ಷಣ ಮಹಾವಿದ್ಯಾಲಯಗಳನ್ನು (ಬಿ.ಇಡಿ ಕಾಲೇಜುಗಳನ್ನು) ವೇತನಾನುದಾನಕ್ಕೊಳಪಡಿಸಲು ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾಗಿರುವ ಪತ್ರದ ಮೂಲಕ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

2) ಈ ಮೊದಲು ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಇವರು 01-06-1987ಕ್ಕಿಂತ ಮುಂಚಿತವಾಗಿ ಪ್ರಾರಂಭವಾದ 28 ಅನುದಾನರಹಿತ ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸಚಿವ ಸಂಪುಟದ ಅನುಮೋದನೆಗಾಗಿ ಮಂಡಿಸಿದ್ದು, ಸಚಿವ ಸಂಪುಟವು ಈ ಶಿಕ್ಷಣ ಮಹಾವಿದ್ಯಾಲಯಗಳಲ್ಲಿ 21 ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಅನುಮೋದನೆ ನೀಡಿದೆ. ಸದರಿ 21 ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೊಳಪಡಿಸಿ, ದಿನಾಂಕ:19-05-2009ರಂದು ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ.

3) ನಂತರ, ದಿನಾಂಕ:01-06-1987ರಿಂದ ಡಿಸೆಂಬರ್ 1996ರವರೆಗಿನ ಅವಧಿಯಲ್ಲಿ ಪ್ರಾರಂಭವಾಗಿರುವ ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಇವರು ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ. ಸದರಿ ಪ್ರಸ್ತಾವನೆಗಳಲ್ಲಿ ಈ ಕೆಳಕಂಡ ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಪ್ರಸ್ತಾಪಿಸಲಾಗಿದೆ.

| ಕ್ರ.ಸಂ. | ಜಿಲ್ಲೆ | ಕಾಲೇಜಿನ ಹೆಸರು | ಕಾಲೇಜು ಪ್ರಾರಂಭವಾದ ದಿನಾಂಕ |
|---|---|---|---|
| 1 | ಬೆಂಗಳೂರು | ಎಸ್.ಜೆ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ | 09-08-1987 |
| 2 | ಬೆಂಗಳೂರು | ಆಲ್ ಅಮೀನ್ ಶಿಕ್ಷಣ ಮಹಾವಿದ್ಯಾಲಯ | 11-04-1990 |
| 3 | ಶಿವಮೊಗ್ಗ | ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ | 27-08-1996 |
| 4 | ಮೈಸೂರು | ಕಾಗಿನೆಲೆ ಶಿಕ್ಷಣ ಮಹಾವಿದ್ಯಾಲಯ | 26-11-1996 |

4) ಅಂತೆಯೇ, ವಿಜಯನಗರ ಶಿಕ್ಷಣ ಮಹಾವಿದ್ಯಾಲಯ, ಹುಬ್ಬಳ್ಳಿ ಈ ಕಾಲೇಜನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಪ್ರತ್ಯೇಕವಾಗಿ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಹಾಗೆಯೇ, ಮೇಲ್ಕಂಡ ಪಟ್ಟಿಯ ಕ್ರಮ ಸಂಖ್ಯೆ 01ರಲ್ಲಿರುವ ಎಸ್.ಜೆ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ಬೆಂಗಳೂರು ಇವರು ತಮ್ಮ ಕಾಲೇಜನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಇಚ್ಛೆ ವ್ಯಕ್ತಪಡಿಸಿರುವುದಿಲ್ಲವೆಂದು ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಇವರು ತಿಳಿಸಿರುತ್ತಾರೆ.

5) ಅಲ್ಲದೇ, ಈ ಕೆಳಕಂಡ ಎರಡು ಶಿಕ್ಷಣ ಮಹಾವಿದ್ಯಾಲಯಗಳನ್ನು ಪ್ರತ್ಯೇಕವಾಗಿ ಪರಿಶೀಲಿಸಿ, ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು. ಆರ್ಥಿಕ ಇಲಾಖೆಯು ಈ ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಆರ್ಥಿಕ ಮಿತವ್ಯಯದ ಆದೇಶದ ಹಿನ್ನೆಲೆಯಲ್ಲಿ, ಯಾವುದೇ ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಅವಕಾಶವಿಲ್ಲವೆಂದು ತಿಳಿಸುತ್ತಾ, ಅಗತ್ಯ ಮಾಹಿತಿಗಳೊಂದಿಗೆ ಸೂಕ್ತ ಸಮಯದಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಪ್ರಸ್ತಾವನೆಗಳನ್ನು ಮತ್ತೆ ಸಲ್ಲಿಸಲು ಸೂಚಿಸಿರುತ್ತದೆ. ಆ ಪ್ರಕಾರ ಈ ಕೆಳಕಂಡ ಕಾಲೇಜುಗಳ ಪ್ರಸ್ತಾವನೆಗಳನ್ನು ಸಚಿವ ಸಂಪುಟದ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

| ಕ.ಸಂ. | ಕಾಲೇಜಿನ ಹೆಸರು | ಕಾಲೇಜು ಪ್ರಾರಂಭವಾದ ದಿನಾಂಕ |
|---|---|---|
| 1. | ಬಿ.ಇ.ಎ ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ | 22-09-1980 |
| 2. | ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯ, ಸಕಲೇಶಪುರ, ಹಾಸನ | 21-08-1986 |

6) ಮೇಲ್ಕಂಡ ಶಿಕ್ಷಣ ಮಹಾವಿದ್ಯಾಲಯಗಳಿಗೆ ಸಂಬಂಧಪಟ್ಟಂತೆ ಪ್ರತಿ ಕಾಲೇಜಿಗೆ ವಾರ್ಷಿಕವಾಗಿ ಶಿಕ್ಷಕರ ವೇತನಾನುದಾನಕ್ಕಾಗಿ ರೂ. 46,80,276ಗಳು ಮತ್ತು ಶಿಕ್ಷಕೇತರ ಸಿಬ್ಬಂದಿಗಾಗಿ ರೂ. 42,09,168/-ಗಳು ಬೇಕಾಗುತ್ತದೆ ಎಂದು ತಿಳಿಸಿದ್ದು, ಒಟ್ಟು ರೂ. 88,89,444/-ಗಳು ಬೇಕಾಗುತ್ತದೆ ಎಂದು ಅಂದಾಜಿಸಲಾಗಿದೆ.

7) ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯು ಸಲ್ಲಿಸಿದ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ದಿನಾಂಕ:01-06-1987ಕ್ಕಿಂತ ಪೂರ್ವದಲ್ಲಿ ಪ್ರಾರಂಭವಾಗಿ ವೇತನಾನುದಾಕ್ಕೊಳಪಡಿಸದೆ ಬಾಕಿ ಉಳಿದಿರುವ ಮೇಲ್ಕಂಡ ಎರಡು ಕಾಲೇಜುಗಳು ಹಾಗೂ ದಿನಾಂಕ:01-06-1987ರಿಂದ ಡಿಸೆಂಬರ್ 1996ನೇ ಸಾಲಿನವರೆಗೆ ಪ್ರಾರಂಭಿಸಲಾದ ನಾಲ್ಕು ಶಿಕ್ಷಣ ಮಹಾವಿದ್ಯಾಲಯಗಳು ಸೇರಿದಂತೆ ಒಟ್ಟು ಆರು ಶಿಕ್ಷಣ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರಿ ಆದೇಶ ಸಂಖ್ಯೆ ಇಡಿ 295 ಯುಎನ್ಇ 2010, ಬೆಂಗಳೂರು, ದಿನಾಂಕ:13-04-2011</u>**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅನುದಾನ ಸಂಹಿತೆ (ಜಿಐಎ) ನಿಯಮಾವಳಿಗಳಿಗೆ ಸೂಕ್ತ ತಿದ್ದುಪಡಿ ತರುವ ಷರತ್ತಿಗೊಳಪಡಿಸಿ, ದಿನಾಂಕ 01-06-1987ರ ಪೂರ್ವದಲ್ಲಿ ಪ್ರಾರಂಭಿಸಲಾಗಿರುವ ಮತ್ತು ದಿನಾಂಕ 01-06-1987ರಿಂದ ಡಿಸೆಂಬರ್ 1996ರ ಅವಧಿಯಲ್ಲಿ ಪ್ರಾರಂಭಿಸಿ, ಸತತವಾಗಿ ನಡೆಯುತ್ತಿರುವ ಈ ಕೆಳಕಂಡ ಶಿಕ್ಷಣ ಮಹಾವಿದ್ಯಾಲಯಗಳನ್ನು ಕೆಳಕಂಡ ಷರತ್ತು/ನಿಬಂಧನೆಗೊಳಪಟ್ಟು ವೇತನಾನುದಾನಕ್ಕೆ ಒಳಪಡಿಸಲು ಆದೇಶಿಸಿದೆ.

| ಕ್ರ.ಸಂ. | ಶಿಕ್ಷಣ ಮಹಾವಿದ್ಯಾಲಯದ ಹೆಸರು ಮತ್ತು ಸ್ಥಳ | ಕಾಲೇಜು ಪ್ರಾರಂಭವಾದ ದಿನಾಂಕ: |
|---|---|---|
| 1 | ಬಿ.ಇ.ಎ. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ, ದಾವಣಗೆರೆ ಜಿಲ್ಲೆ | 22-09-1980 |
| 2 | ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯ, ಸಕಲೇಶಪುರ, ಹಾಸನ ಜಿಲ್ಲೆ | 21-08-1986 |
| 3 | ವಿಜಯನಗರ ಶಿಕ್ಷಣ ಮಹಾವಿದ್ಯಾಲಯ, ಹುಬ್ಬಳ್ಳಿ, ಧಾರವಾಡ ಜಿಲ್ಲೆ | 05-09-1987 |
| 4 | ಅಲ್ ಅಮೀನ್ ಶಿಕ್ಷಣ ಮಹಾವಿದ್ಯಾಲಯ, ಬೆಂಗಳೂರು | 11-04-1990 |
| 5 | ಕುಮುದ್ವತಿ ಶಿಕ್ಷಣ ಮಹಾವಿದ್ಯಾಲಯ, ಶಿಕಾರಿಪುರ, ಶಿವಮೊಗ್ಗ ಜಿಲ್ಲೆ | 27-08-1996 |
| 6 | ಕಾಗಿನೆಲೆ ಶಿಕ್ಷಣ ಮಹಾವಿದ್ಯಾಲಯ, ಮೈಸೂರು, ಮೈಸೂರು ಜಿಲ್ಲೆ | 26-11-1996 |

ಷರತ್ತು/ನಿಬಂಧನೆಗಳು:

1. ಪ್ರಸ್ತುತ ಪ್ರಕರಣಗಳಲ್ಲಿ ವಿಸ್ತರಿಸಿರುವ ಅರ್ಹತಾದಾಯಕ ಅವಧಿಯನ್ನು ಯಥಾವತ್ತಾಗಿ, ಬೇರೆ ಯಾವುದೇ ಪ್ರಕರಣಗಳಿಗೆ ಅನ್ವಯಿಸಕೂಡದು;
2. ಅನುದಾನ ಸಂಹಿತೆ/ಎನ್‌ಸಿಟಿಇ/ಯುಜಿಸಿಯ ಮಾನದಂಡಗಳ ಪ್ರಕಾರ ಅಗತ್ಯ ಶೈಕ್ಷಣಿಕ ಮತ್ತು ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕು.
3. ಅನುದಾನ ಸಂಹಿತೆ/ಎನ್‌ಸಿಟಿಇ/ಯುಜಿಸಿಯ ಮಾನದಂಡಗಳ ಪ್ರಕಾರ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ವರ್ಗೀಕರಿಸಿ ನಿಗದಿಪಡಿಸಿರಬೇಕು.
4. ಕರ್ನಾಟಕ ರಾಜ್ಯ ಸರ್ಕಾರದ ಶಿಕ್ಷಣ ಇಲಾಖೆಯ/ಎನ್‌ಸಿಟಿಇ/ಯುಜಿಸಿಯ ಕಾಲಕಾಲಕ್ಕೆ ಜಾರಿಯಲ್ಲಿರುವ ನೇಮಕಾತಿ ನಿಯಮಗಳ ಪ್ರಕಾರ ಹುದ್ದೆಗಳ ವಿದ್ಯಾರ್ಹತೆ, ವಯೋಮಿತಿ ಹಾಗೂ ಇತರ ಶೈಕ್ಷಣಿಕ ಅರ್ಹತೆಗಳನ್ನು ನಿಗದಿಪಡಿಸಿ, ಅವುಗಳನ್ನು ಪಾಲಿಸಿರಬೇಕು.
5. ಹುದ್ದೆಗಳನ್ನು ಭರ್ತಿ ಮಾಡುವ ಮುನ್ನ ಸಂಬಂಧಿಸಿದ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದಿರಬೇಕು. ಅನುಮೋದನೆ ಪಡೆಯದೇ ಇರುವ ಅರ್ಹ ಹುದ್ದೆಗಳನ್ನು ವೇತನಾನುದಾನ ಸಹಿತ ಅನುಮೋದನೆಯನ್ನು ಪಡೆಯತಕ್ಕದ್ದು.
6. ಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಮಾರ್ಗಸೂಚಿಗಳನ್ನು/ ಆದೇಶಗಳನ್ನು ತಪ್ಪದೇ ಪಾಲಿಸಿರಬೇಕು.
7. ಪ್ರಸ್ತಾಪಿತ ಕಾಲೇಜುಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಯಾವುದೇ ವಿವಾದ ಇರುವುದಿಲ್ಲ ಎಂಬುದನ್ನು ದೃಢಪಡಿಸಿಕೊಂಡ ನಂತರವೇ ವೇತನ ಅನುದಾನಕ್ಕೊಳಪಡಿಸುವುದು.
8. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಇವರು ಈ ಮೇಲಿನ ಷರತ್ತು/ನಿಬಂದನೆಗಳನ್ನು ಸಂಬಂಧಿಸಿದ ಕಾಲೇಜುಗಳ ಪಾಲಿಸಿವೆಯೇ ಎಂಬ ಅಂಶಗಳನ್ನು ದೃಢಪಡಿಸಿಕೊಂಡು ಸರ್ಕಾರಕ್ಕೆ ಕಾಲೇಜುವಾರು ವರದಿಯನ್ನು ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂ. ಆಇ 55 ವೆಚ್ಚ–8/2011, ದಿನಾಂಕ:17–01–2011ರಲ್ಲಿ ಹಾಗೂ ದಿನಾಂಕ:25–01–2011ರ ಅನಧಿಕೃತ ಟಿಪ್ಪಣಿಯಲ್ಲಿ ಮತ್ತು ಟಿಪ್ಪಣಿ ಸಂ. ಆಇ 313 ವೆಚ್ಚ 8/2011, ದಿನಾಂಕ:29–03–2011ರಲ್ಲಿ ನೀಡಿರುವ ಅಭಿಪ್ರಾಯ/ಸಹಮತಿಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಯು.ಬಿ. ಉಳವಿ) 13/4/11
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

**ಇವರಿಗೆ:–**

**ಸಂಕಲನಕಾರರು**, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

**ಪ್ರತಿಯನ್ನು**

1. **ಮಹಾಲೇಖಪಾಲರು** (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. **ಸನ್ಮಾನ್ಯ** ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.

**PRINCIPAL**
**Vijayanagar College of Education**
**Vidyanagar, HUBLI-31.**

**PRINCIPAL**
**Vijayanagar College of Education**
**Vidyanagar, HUBLI-31.**

3. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ/ಯೋಜನಾ ಇಲಾಖೆ, ಬೆಂಗಳೂರು
5. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
6. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್ – ಶಿವಮೊಗ್ಗ.
7. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು.
8. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
9. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು /ಮೈಸೂರು/ಶಿವಮೊಗ್ಗ/ಧಾರವಾಡ ಜಿಲ್ಲೆಗಳು.
10. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ರಾಜ್ಯ ಖಜಾನೆ ಇಲಾಖೆ, ಬೆಂಗಳೂರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
14. ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಯೋಜನೆ)
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7&8) ವಿಧಾನ ಸೌಧ.
16. ಸಂಬಂಧಪಟ್ಟ ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ (ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯ ನಿರ್ದೇಶಕರ ಮುಖಾಂತರ)
17. ವಿಶೇಷಾಧಿಕಾರಿ, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು.
18. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಶಿವಮೊಗ್ಗ/ಧಾರವಾಡ ಜಿಲ್ಲೆಗಳು.
19. ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು/ಮೈಸೂರು/ಶಿವಮೊಗ್ಗ/ಧಾರವಾಡ.
20. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ/ಸರ್ಕಾರದ ಉಪಕಾರ್ಯದರ್ಶಿ (ವಿಶ್ವವಿದ್ಯಾಲಯಗಳು) ಯವರ ಆಪ್ತ ಸಹಾಯಕರು.
21. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

*********